**ಕರ್ನಾಟಕ ಸರ್ಕಾರ**

**ಸಂಖ್ಯೆ:ಸಿಆಸುಇ:114:ಆರ್.ಟಿ.ಐ.:2015**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 05.08.2015.**

# ಸುತ್ತೋಲೆ

ವಿಷಯ: ಕರ್ನಾಟಕ ಮಾಹಿತಿ ಆಯೋಗದ ವಾರ್ಷಿಕ ವರದಿ ತಯಾರಿಕೆಗೆ ವಾಸ್ತವಿಕ/ ಸರಿಯಾದ ಮಾಹಿತಿಯನ್ನು ಒದಗಿಸುವ ಬಗ್ಗೆ

---0---

ಕರ್ನಾಟಕ ಮಾಹಿತಿ ಆಯೋಗವು 2013-14ನೇ ಸಾಲಿನ ವಾರ್ಷಿಕ ವರದಿಯಲ್ಲಿ ಈ ಮುಂದಿನಂತೆ ಶಿಫಾರಸ್ಸು ಮಾಡಿರುತ್ತದೆ:-

**"ರಾಜ್ಯ ಸರ್ಕಾರದ ಇಲಾಖೆಗಳು ಮಾಹಿತಿಯನ್ನು ವಿಳಂಬವಾಗಿ ಒದಗಿಸುವುದಲ್ಲದೆ ಹಾಗೂ ಒದಗಿಸಿರುವ ಮಾಹಿತಿಯಲ್ಲಿ ವ್ಯತ್ಯಾಸಗಳು ಹಾಗೂ ಅಸಂಬದ್ಧಗಳು ಇರುತ್ತಿದ್ದು ಅವುಗಳನ್ನು ಪರಿಶೀಲಿಸುವುದಕ್ಕಾಗಿ ಸೂಕ್ತ ಕಾಳಜಿ ಸಹ ತೆಗೆದುಕೊಳ್ಳುವುದಿಲ್ಲ ಮತ್ತು ಇಲಾಖೆಗಳು ಕಳುಹಿಸಿರುವ ಮಾಹಿತಿಯನ್ನು ಪರಿಶೀಲಿಸಿ ಅದನ್ನು ಸರಿಪಡಿಸಿ ಪರಿಷ್ಕೃತ ಮಾಹಿತಿಯನ್ನು ಒದಗಿಸುವಂತೆ ಆಯೋಗ ಅವಕಾಶಗಳನ್ನು ನೀಡುತ್ತಿದ್ದರೂ ಸಹ ಇಲಾಖೆಗಳು ಆ ಅವಕಾಶವನ್ನು ಸರಿಯಾಗಿ ಉಪಯೋಗಿಸಿಕೊಳ್ಳುತ್ತಿಲ್ಲವಾದ್ದರಿಂದ ಸೂಕ್ತ ಸೂಚನೆಗಳನ್ನು ನೀಡುವುದು".**

ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 25(1) ರ ಮೇರೆಗೆ ಕರ್ನಾಟಕ ಮಾಹಿತಿ ಆಯೋಗವು ಪ್ರತಿಯೊಂದು ವರ್ಷದ ಮುಕ್ತಾಯದ ನಂತರ ಸಾಧ್ಯವಾದಷ್ಟು ಬೇಗನೇ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದಾಗಿದೆ ಮತ್ತು ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 25(2)ರ ಮೇರೆಗೆ ಪ್ರತಿಯೊಂದು ಸಚಿವಾಲಯವು ಅಥವಾ ಇಲಾಖೆಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ, ಈ ಪ್ರಕರಣದ ಅಡಿಯಲ್ಲಿ ವರದಿಯನ್ನು ಸಿದ್ಧಪಡಿಸಲು ಆಗತ್ಯಪಡಿಸಲಾದಂಥ ಮಾಹಿತಿಯನ್ನು ಸಂಗ್ರಹಿಸಿ ಮಾಹಿತಿ ಆಯೋಗಕ್ಕೆ ಒದಗಿಸತಕ್ಕದ್ದು.

ಆದ್ದರಿಂದ, ಕರ್ನಾಟಕ ಮಾಹಿತಿ ಆಯೋಗವು ಸರಿಯಾದ ಸಮಯದಲ್ಲಿ ನಿಖರವಾದ ಮಾಹಿತಿಯೊಂದಿಗೆ ತನ್ನ ವಾರ್ಷಿಕ ವರದಿಯನ್ನು ಅಂತಿಮಗೊಳಿಸಲು ಸಾಧ್ಯವಾಗುವಂತೆ, ಕಾಲಮಿತಿಯೊಳಗೆ ತಮ್ಮ ಇಲಾಖೆಗೆ ಸಂಬಂಧಿಸಿದ ನಿಖರ ಮಾಹಿತಿಯನ್ನು ಆಯೋಗಕ್ಕೆ ಒದಗಿಸುವುದಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದೆ.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು

2...

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ(ಜನಸ್ಪಂದನ), ವಿ.ವಿ.ಗೋಪುರ.
5. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

Letter Received

27/8/2015